# ನಾರಸಿಂಹನೆಂಬೊ ದೇವನು ನಂಬಿದಂಥ

1. **Ref.:** Dasara Padagalu – Purandara Dasara Keerthane, Samyukta Samputa, Edited by Shri Pavanje Gururao, Sriman Madhwa Siddantha Granthalaya, Udupi, page No. 320.
2. **Note:** This song is not available in other standard books that I referred.
3. **Note:** The lyrics given without highlights are as per Ref. 1. The wordings given in green highlights are as per the singer who has added six more stanzas in the beginning of the song itself.

ರಾಗ: ಸುರುಟಿ ತಾಳ: ಆದಿ

ನಾರಸಿಂಹನೆಂಬೊ ದೇವನು ನಂಬಿದಂಥ
ನರರಿಗೆಲ್ಲ ವರವ ಕೊಡುವನು ॥ ಪ ॥

ಓಂ ನಮಃ ಶಿವಾಯ ಎನುತಲಿ
ಅಸುರ ತನ್ನ ಸುತನ ಬರೆದು ತೋರು ಎನಲು
ನರಹರಿಯ ನಾಮವನ್ನು ನಗುನಗುತಲೆ ಬರೆಯುತಿರಲು
ಎಡದ ತೊಡೆಯ ಮೇಲಿದ್ದ ಶಿಶುವ ಧರೆಗೆ ಬಡಿದು ನೂಕಿದನು ॥ 1 ॥

ಸುತ್ತ ಜನರ ಕರೆಸಿ ಬೇಗದಿ
ಅರಸು ತನ್ನ ಸುತನ ಕೊಲ್ಲಿಸಬೇಕೆಂದಾಗ
ಅಟ್ಟ ಅಡವಿಯೊಳು ವಿಷವನಿಟ್ಟು ಭೋಜನಂಗಳ ಮಾಡಿ
ಹರಿಯ ಸ್ಮರಣೆ ಮಾತ್ರದಿಂದ ಕುಂಜಿ ತಿಳಿದ ಜಟ್ಟಿಹಾಂಗೆ ॥ 2 ॥

ಅಂಬುಧಿಯೊಳು ಮಗನ ಮಲಗಿಸಿ
ಮೇಲೆ ದೊಡ್ಡ ಬೆಟ್ಟವನ್ನು ಇಟ್ಟುಬನ್ನಿರೋ
ಹರಿಯ ಕೃಪೆಗೆ ವಶನಾದ ತರಳನೆಂದು ವರುಣದೇವ
ಮರಣ ಇಲ್ಲದ್ಹಾಗೆ ಮಾಡಿ ಮನೆಗೆ ಕೊಟ್ಟು ಕಳುಹಿದನು ॥ 3 ॥

ಬೆಟ್ಟದಿಂದ ಕಟ್ಟಿ ಉರುಳಿಸಿ ಅಸುರ ತನ್ನ
ಪಟ್ಟದಾನೆ ಕಾಲಲಿ ಮೆಟ್ಟಿಸಿ

ಉರಿವ ಒಲೆಯ ಮಾಡಿ ಸುಟ್ಟು ಹುಲಿಯ ಬೋನಿನಲ್ಲಿಟ್ಟು
ಯತ್ನವಿಲ್ಲದೆ ಸುತನ ಕೊಲ್ಲಲಿಕ್ಕೆ ಶಕ್ತನಲ್ಲದೆ ಪೋದನಂತೆ || 4 ||

ನಿನ್ನ ದೇವ ಇದ್ದ ಎಡೆಯನು ತೋರು ಎನುತ
ಪಿತನು ತನ್ನ ಸುತನ ಕೋರಲು
ಎನ್ನ ದೇವ ಇಲ್ಲದಂತ ಎಡೆಗಳುಂಟೆ ಲೋಕದಲ್ಲಿ
ಕಂಬದಲ್ಲೂ ಇರುವನೆಂದು ಕೈಯ ಮುಗಿದು ತೋರ್ದನಾಗ || 5 ||

ವರ ಕಂಬವನ್ನು ಒದೆಯಲು ನರಹರಿಯು ಉಗ್ರ ಕೋಪವನ್ನು ತಾಳಿದ
ಕಟಕಟೆಂಬ ಧ್ವನಿಯ ಮಾಡಿ ನಖಗಳಿಂದ
ಪಿಡಿದು ಒತ್ತಿ ಕರುಳ ಬಗೆದು
ಮಾಲೆ ಹಾಕಿ ಕಂದ ಭಕ್ತನಪ್ಪಿಕೊಂಡ || 6 ||

ಅಂತರಿಕ್ಷದಲಿ ಅಮರರು ನೋಡಿ ಆಗ
ಪುಷ್ಪವೃಷ್ಟಿಯನ್ನೆ ಕರೆದರು
ಅಜನ ಪಡೆದ ದೇವಿ ಬಂದು ತೊಡೆಯ ಮೇಲೆ ಕುಳಿತುಕೊಂಡು
ಅಮರಪತಿಯರೆಲ್ಲರ ನೋಡಿ ಅಂಜಬೇಡೆಂದಭಯ ಕೊಟ್ಟ || 7 ||

ಲಕ್ಷ್ಮೀನಾರಸಿಂಹ ಚರಿತೆಯ ಉದಯಕಾಲ
ಪಠಿಸುವಂತ ನರರಿಗೆಲ್ಲ ಪುತ್ರಸಂತಾನಂಗಳಿತ್ತು
ಮತ್ತೆ ಬೇಡಿದ್ದಾಗೆ ಕೊಟ್ಟು
ಭಕ್ತವತ್ಸಲ ಮುಕ್ತಿಕೊಡುವ ಪುರಂದರ ವಿಠಲರೇಯ || 8 ||

**Note:** Below given lyrics in green highlights are as per the singer. These lyrics are not in any standard books that I referred.

ನಾರಸಿಂಹನೆಂಬೊ ದೇವನು ನಂಬಿದಂಥ
ನರರಿಗೆಲ್ಲ ವರವ ಕೊಡುವನು || ಪ ||

ಆದಿಯಲ್ಲಿ ಲಕ್ಷ್ಮೀ ಸಹಿತದಿ ಮಲಗಿರಲು
ಬಂದರಾಗ ಸನತ್ಕುಮಾರರು

ಆಗ ದ್ವಾರಪಾಲಕರು ತಡೆಯಲಾಗ ಕೋಪದಿಂದ
ಮೂರು ಜನ್ಮದಲ್ಲಿ ನೀವು ಅಸುರರಾಗಿ ಪುಟ್ಟಿರೆಂದರು ॥ 1 ॥

ದ್ವಿತೀಯ ಗರ್ಭದಲ್ಲಿ ಜನಿಸಿದ ಹಿರಣ್ಯಾಕ್ಷ
ಹಿರಣ್ಯಕಶಿಪುರೆಂಬ ಭ್ರಾತೃರು
ಪೃಥ್ವಿಯನ್ನು ಮುಳುಗಿಸಿದ ಕಾರಣಾದಿ ಶ್ರೀಹರಿಯು
ತೃತೀಯ ರೂಪದಿಂದ ಖಳನ ಕೊಂದು ಧರೆಯನುಳಿಹಿದನು ॥ 2 ॥

ಅನುಜನಾದ ಹಿರಣ್ಯಾಕ್ಷನ ಮರಣವನ್ನು
ಕೇಳಿ ಆಗ ನಡೆದ ತಪಸ್ಸಿಗೆ
ಹರಿಯ ಮೇಲೆ ಸಿಟ್ಟಿನಿಂದ ಉಗ್ರ ತಪಸ್ಸನ್ನು ಮಾಡಿ
ಬ್ರಹ್ಮನಿಂದ ವರಗಳನ್ನು ಪಡೆದುಕೊಂಡು ಬಂದನಾಗ ॥ 3 ॥

ಇಂದ್ರಲೋಕ ಸೂರೆ ಮಾಡಿದ
ಮೂರು ಲೋಕಕೆ ಅಸುರ ತನ್ನ ಭಯವ ತೋರಿದ
ಗರ್ಭಿಣಿ ಕಯಾದುವನ್ನು ಬ್ರಹ್ಮಪುತ್ರ ಬಂದು ಆಗ
ದೈತ್ಯ ರಾಜ ಹಿರಣ್ಯಕಶಿಪುವಿಗೆ ಒಪ್ಪಿಸಿದನು ॥ 4 ॥

ನವಮಾಸಗಳು ತುಂಬಲು ಕಯಾದು
ಆಗ ಪುತ್ರರತ್ನವನ್ನು ಪಡೆದಳು
ನಾಮಕರಣವನ್ನು ಮಾಡಿ ವಿಪ್ರರನ್ನು ಕರೆಸಿ ಬೇಗ
ದೈತ್ಯ ತನ್ನ ಸುತಗೆ ಪ್ರಹ್ಲಾದನೆಂದು ಕರೆಸಿದನು ॥ 5 ॥

ಬಾಲಚಂದ್ರನಂತೆ ಹೊಳೆಯುತಾ ಇರುತಿರಲು
ಐದು ವರ್ಷ ತುಂಬಿತಾಗಲೆ
ಗುರುಗಳನ್ನು ಕರೆಸಿ ಬೇಗ ಸಕಲ ವಿದ್ಯೆ ಕಲಿಸಿರೆಂದು
ಗುರುಗಳಿಗೆ ಮಗನನ್ನು ಒಪ್ಪಿಸಿದ ದೈತ್ಯ ತಾನು ॥ 6 ॥

ಓಂ ನಮಃ ಶಿವಾಯ ಎನುತಲಿ
ಅಸುರ ತನ್ನ ಸುತನ ಬರೆದು ತೋರು ಎನಲು
ನರಹರಿಯ ನಾಮವನ್ನು ನಗುನಗುತಲೆ ಬರೆಯುತಿರಲು
ಎಡದ ತೊಡೆಯ ಮೇಲಿದ್ದ ಶಿಶುವ ಬಡಿದು ಧರೆಗೆ ನೂಕಿದನು ॥ 7 ॥

ಸುತ್ತ ಜನರ ಕರೆಸಿ ಬೇಗದಿ
ಅಸುರ ತನ್ನ ಸುತನ ಕೊಲ್ಲಿಸಬೇಕೆಂದಾಗ
ಅಟ್ಟ ಅಡವಿಯೊಳು ವಿಷವನಿಟ್ಟು ಭೋಜನಂಗಳ ಮಾಡಿ
ಹರಿಯ ಸ್ಮರಣೆ ಮಾತ್ರದಿಂದ ಭುಂಜಿ ತಿಳಿದ ಜಟ್ಟಿಹಾಂಗೆ ।। 8 ।।

ಅಂಬುಧಿಯೊಳು ಮಗನ ಮಲಗಿಸಿ
ಮೇಲೆ ದೊಡ್ಡ ಬೆಟ್ಟವನಿಟ್ಟು ಬನ್ನಿರೋ
ಹರಿಯ ಕೃಪೆಗೆ ವಶನಾದ ತರಳನೆಂದು ವರುಣದೇವ
ಮರಣ ಇಲ್ಲದಹಾಂಗೆ ಮಾಡಿ ಮನೆಗೆ ಕೊಟ್ಟು ಕಳುಹಿದನು ।। 9 ।।

ಬೆಟ್ಟದಿಂದ ಕಟ್ಟಿ ಉರುಳಿಸಿ ಅಸುರ
ತನ್ನ ಪಟ್ಟದಾನೆ ಕಾಲಲಿ ಮೆಟ್ಟಿಸಿ
ಉರಿವ ಒಲೆಯ ಮಾಡಿ ಸುಟ್ಟು ಹುಲಿಯ ಬೋನಿನಲ್ಲಿಟ್ಟು
ಯತ್ನವಿಲ್ಲದೆ ಸುತನ ಕೊಲ್ಲಲು ಶಕ್ತನಲ್ಲದೆ ಪೋದನಂತೆ ।। 10 ।।

ನಿನ್ನ ದೇವ ಇದ್ದ ಎಡೆಯನು ತೋರು
ಎನುತ ಪಿತನು ತನ್ನ ಸುತನ ಕೋರಲು
ಎನ್ನ ದೇವ ಇಲ್ಲದಂತ ಎಡೆಗಳುಂಟೆ ಲೋಕದಲ್ಲಿ
ಕಂಬದಲ್ಲೂ ಇರುವನೆಂದು ಕೈಯ ಮುಗಿದು ತೋರ್ದನಾಗ ।। 11 ।।

ವರ ಕಂಬವನ್ನು ಒದೆಯಲು ನರಹರಿಯು ಉಗ್ರ ಕೋಪವನ್ನು ತಾಳಿದ
ಕಟಕಟೆಂಬ ಧ್ವನಿಯ ಮಾಡಿ ನಖಗಳಿಂದ
ಪಿಡಿದು ಒತ್ತಿ ಕರುಳ ಬಗೆದು
ಮಾಲೆ ಹಾಕಿ ಕಂದ ಭಕ್ತನಪ್ಪಿಕೊಂಡ ।। 12 ।।

ಅಂತರಿಕ್ಷದಲಿ ಅಮರರು ನೋಡಿ ಆಗ
ಪುಷ್ಪವೃಷ್ಟಿಯನ್ನೆ ಕರೆದರು
ಅಜನ ಪಡೆದ ದೇವಿ ಬಂದು ತೊಡೆಯ ಮೇಲೆ ಕುಳಿತಿರಲು
ಅಮರಪತಿಯರೆಲ್ಲರ ನೋಡಿ ಅಂಜಬೇಡೆಂದಭಯವಿತ್ತ ।। 13 ।।

ಲಕ್ಷ್ಮೀನಾರಸಿಂಹ ಚರಿತೆಯ
ಉದಯಕಾಲ ಪಠಿಸುವಂತ ನರರಿಗೆಲ್ಲ ಪುತ್ರ ಸಂತಾನಂಗಳಿತ್ತು
ಮತ್ತೆ ಬೇಡಿದಹಾಂಗೆ ಕೊಟ್ಟು
ಭಕ್ತವತ್ಸಲ ಮುಕ್ತಿಕೊಡುವ ಪುರಂದರ ವಿಠಲ ರಾಯ ॥ 14 ॥

**ಕಠಿಣ ಪದಗಳ ಅರ್ಥ ಮತ್ತು ಟಿಪ್ಪಣಿ:**

**ಕುಂಜು =** ಹಾರು, ಜಿಗಿ, ಕುಪ್ಪಳಿಸು

**ಅಂಬುಧಿ =** ಸಮುದ್ರ

**Classification:** Keerthane
**Ankita:** purandara vittala
**Location:** NA
**Category:** Narasimha Avatara
**Sub-Category:** Narasimha, deva, nara, shiva, asura, maga, nage, koosu, jana, kaadu, Krishna, smarane, Samudra, parvata, hanuma, marana, mane, gaja, huli, tande, loka, kai, sittu, akasha, pushpa, beligge, udaya,
**Pravachana:** NA
**Explanation:** NA